# All India Radio: Bangalore
# National Bulletin In Kannada
# 12.03.2025 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.03.2025 1.10 p.m.**

****************

ಮುಖ್ಯಾಂಶಗಳು

1. ಮಾರಿಷಸ್ ಭಾರತದ ಪಾಲುದಾರ ರಾಷ್ಟ್ರ ಮಾತ್ರವಲ್ಲ, ಕುಟುಂಬದ ಒಂದು ಭಾಗ – ಪ್ರಧಾನಿ ನರೇಂದ್ರ ಮೋದಿ ಅಭಿಮತ
2. ಸೌಲಭ್ಯ ವಂಚಿತ ಹಾಗೂ ಹಿಂದುಳಿದ ವರ್ಗಗಳ ಜನರ ಕಲ್ಯಾಣಕ್ಕಾಗಿ ಶ್ರಮಿಸುವುದು ಅತ್ಯಗತ್ಯ– ರಾಷ್ಟ್ರಪತಿ ದ್ರೌಪದಿ ಮುರ್ಮು
3. ಅಮೆರಿಕದ ಗುಪ್ತಚರ ನಿರ್ದೇಶಕಿ ತುಳಸಿ ಗಬ್ಬಾರ್ಡ್ ಮುಂದಿನ ವಾರ ಭಾರತಕ್ಕೆ ಭೇಟಿ; ಉಭಯ ದೇಶಗಳ ಬಾಂಧವ್ಯ ವೃದ್ಧಿ ಸಂಬಂಧ ಮಾತುಕತೆ
4. ಕೆನಡಾದ ಉಕ್ಕು ಮತ್ತು ಅಲ್ಯುಮಿನಿಯಂ ವಸ್ತುಗಳ ರಫ್ತಿನ ಮೇಲೆ ದುಪ್ಪಟ್ಟು ತೆರಿಗೆ ವಿಧಿಸಿದ ಅಮೆರಿಕ; ಇಂದಿನಿಂದಲೇ ಜಾರಿ
5. ವಿಶ್ವ ಪ್ಯಾರಾ ಗ್ರ್ಯಾಂಡ್ ಪ್ರಿಕ್ಸ್ ಅಥ್ಲೆಟಿಕ್ಸ್; ಡಿಸ್ಕಸ್ ಥ್ರೋನಲ್ಲಿ ಭಾರತದ ಕ್ರೀಡಾಪಟುಗಳ ಮೇಲುಗೈ; ಚಿನ್ನದ ಪದಕ ಮುಡಿಗೇರಿಸಿಕೊಂಡ ಸಾಗರ್

****************

ಮಾರಿಷಸ್ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅಲ್ಲಿನ ರಾಷ್ಟ್ರೀಯ ದಿನಾಚರಣೆ ಸಮಾರಂಭದಲ್ಲಿಂದು ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಮಾರಿಷಸ್‌ನ ರಾಷ್ಟ್ರೀಯ ದಿನಾಚರಣೆ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸುತ್ತಿರುವುದು ಇದು ಎರಡನೇ ಬಾರಿಯಾಗಿದೆ.

ಭಾರತೀಯ ವಾಯು ಸೇನಾಪಡೆಯ ಆಕಾಶ ಗಂಗಾ ಸ್ಕೈ ಡೈವಿಂಗ್ ತಂಡ, ಭಾರತೀಯ ನೌಕಾಪಡೆಯ ಇಂಫಾಲ್ ನೇವಲ್‌ಶಿಪ್ ಈ ಸಮಾರಂಭದಲ್ಲಿ ಪಾಲ್ಗೊಳ್ಳಲಿವೆ.

ಪ್ರಧಾನಿ ಅವರು, ನಿನ್ನೆ ಮಾರಿಷಸ್‌ನ ಸಹವರ್ತಿ ನವೀನ್‌ಚಂದ್ರ ರಾಮ್ ಗೂಲಂ ಅವರನ್ನು ಪೋರ್ಟ್ ಲೂಹಿಸ್‌ನಲ್ಲಿ ಭೇಟಿಯಾಗಿ ಮಹತ್ವದ ಮಾತುಕತೆ ನಡೆಸಿದರು. ಉಭಯ ದೇಶಗಳ ನಡುವಿನ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ಪ್ರಕಟಿಸಿದರು.

ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳ ಕುರಿತು ನಾಯಕರು ಪರಾಮರ್ಶೆ ನಡೆಸಿದರು. ಮುಂಬರುವ ದಿನಗಳಲ್ಲಿ ಉಭಯ ದೇಶಗಳ ನಡುವಿನ ಸಂಬಂಧಗಳನ್ನು ಮತ್ತಷ್ಟು ಉತ್ತುಂಗ ಸ್ಥಾನಕ್ಕೆ ಕೊಂಡೊಯ್ಯುವ ಬಗೆಗಿನ ಮಾರ್ಗೋಪಾಯಗಳ ಕುರಿತು ಉಭಯ ನಾಯಕರು ಚರ್ಚಿಸಿದರು.

ರಕ್ಷಣಾ, ಭದ್ರತೆ, ಆರ್ಥಿಕ ಸಂಬಂಧಗಳು ಮತ್ತು ಸಾಂಸ್ಕೃತಿಕ ವಿನಿಮಯ ಸೇರಿದಂತೆ ವಿವಿಧ ವಲಯಗಳಲ್ಲಿ ಸಂಬಂಧಗಳ ವೃದ್ಧಿ ಕುರಿತು ನಾಯಕರು ಚರ್ಚಿಸಿದರು.

ಮಾರಿಷಸ್‌ನ ಅಭಿವೃದ್ಧಿಯಲ್ಲಿ ಭಾರತ ಮೌಲ್ಯಯುತ ಮತ್ತು ನಂಬಿಕಸ್ಥ ಪಾಲುದಾರ ರಾಷ್ಟ್ರವಾಗಿ ಮುಂದುವರಿಯಲಿದೆ ಎಂದು ಪ್ರಧಾನಿ ತಿಳಿಸಿದರು.

ಜಗತ್ತಿನ ದಕ್ಷಿಣ ವಲಯದಲ್ಲಿನ ಹಿತಾಸಕ್ತಿಗಳ ರಕ್ಷಣೆಗೆ ಉಭಯ ದೇಶಗಳು ಒಟ್ಟಾಗಿ ಶ್ರಮಿಸಲಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಬಳಿಕ ಮಾರಿಷಸ್‌ನ ಪ್ರಧಾನಿ ನವೀನ್‌ಚಂದ್ರ ರಾಮ್ ಗೂಲಂ ಏರ್ಪಡಿಸಿದ್ದ ಔತಣಕೂಟದಲ್ಲಿ ಪಾಲ್ಗೊಂಡಿದ್ದ ಪ್ರಧಾನಿ ನರೇಂದ್ರ ಮೋದಿ ಭಾರತ ಮತ್ತು ಮಾರಿಷಸ್ ಪಾಲುದಾರಿಕೆ ನಮ್ಮ ಐತಿಹಾಸಿಕ ಸಂಬಂಧಗಳಿಗೆ ಮಾತ್ರ ಸೀಮಿತವಾಗಿರುವುದಿಲ್ಲ. ಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಮೌಲ್ಯಯುತ ಮತ್ತು ಪರಸ್ಪರ ನಂಬಿಕೆಯ ಹಾಗೂ ಸಮಾನ ದೃಷ್ಟಿಕೋನಗಳಲ್ಲಿ ಸಂಬಂಧ ವೃದ್ಧಿಗೆ ಶ್ರಮಿಸಲಾಗುವುದು ಎಂದು ತಿಳಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( 20 ಸೆಕೆಂಡ್‌ಗಳು)

ಈ ನಡುವೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮಾರಿಷಸ್‌ನ ಅತ್ಯುನ್ನತ ನಾಗರಿಕ ಪ್ರಶಸ್ತಿ 'ಗ್ರ್ಯಾಂಡ್ ಕಮಾಂಡರ್ ಆಫ್ ದಿ ಆರ್ಡರ್ ಆಫ್ ದಿ ಸ್ಟಾರ್ ಅಂಡ್ ಕೀ ಆಫ್ ಇಂಡಿಯನ್ ಓಷಿಯನ್' ನೀಡಲು ನಿರ್ಧರಿಸಿರುವುದಾಗಿ ಮಾರಿಷಸ್ ಪ್ರಧಾನಿ ಡಾ.ನವೀನ್‌ಚಂದ್ರ ರಾಮಗೂಲಂ ಘೋಷಿಸಿದ್ದಾರೆ. ಈ ಮೂಲಕ ಪ್ರಧಾನಿ ನರೇಂದ್ರ ಮೋದಿ ಈ ಪ್ರಶಸ್ತಿ ಪಡೆದ ಮೊದಲ ಭಾರತೀಯರಾಗಿದ್ದಾರೆ.

****************

ಪ್ರಧಾನಿ ನರೇಂದ್ರ ಮೋದಿ ಮಾರಿಷಸ್‌ನ ಪೋರ್ಟ್ ಲೂಯಿಸ್‌ನಲ್ಲಿ ನಿನ್ನೆ ರಾತ್ರಿ ಭಾರತೀಯ ಸಮುದಾಯವನ್ನುದ್ದೇಶಿಸಿ ಭಾಷಣ ಮಾಡಿದರು. ಭಾರತ ಹಾಗೂ ಜಾಗತಿಕ ದಕ್ಷಿಣ ವಲಯದ ನಡುವೆ ಮಾರಿಷಸ್ ಅತ್ಯಂತ ಪ್ರಮುಖವಾದ ಸೇತುವೆಯಾಗಿದೆ ಎಂದು ಹೇಳಿದ್ದಾರೆ.

2015 ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ದ್ವೀಪ ರಾಷ್ಟ್ರಕ್ಕೆ ಮೊದಲ ಬಾರಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಘೋಷಿಸಿದ್ದಂತೆ ಮಾರಿಷಸ್ ಯಾವಾಗಲೂ ಭಾರತದ ಸಾಗರ ಮುನ್ನೋಟದ ಹೃದಯ ಭಾಗದಲ್ಲಿರುತ್ತದೆ ಎಂದು ತಿಳಿಸಿದ್ದಾರೆ.

ಮಾರಿಷಸ್ ಭಾರತದ ಪಾಲುದಾರ ರಾಷ್ಟ್ರ ಮಾತ್ರ ಆಗಿರದೆ, ಭಾರತದ ಕುಟುಂಬದ ಒಂದು ಭಾಗವಾಗಿದೆ. ಉಭಯ ದೇಶಗಳ ನಡುವಿನ ಬಾಂಧವ್ಯ ಇತಿಹಾಸ, ಪರಂಪರೆ ಮತ್ತು ಮಾನವೀಯ ಸ್ಫೂರ್ತಿಯಲ್ಲಿ ಭದ್ರವಾಗಿ ಬೇರೂರಿದೆ ಎಂದು ಹೇಳಿದ್ದಾರೆ.

ಧ್ವನಿ: ಪ್ರಧಾನಿ ನರೇಂದ್ರ ಮೋದಿ (27 ಸೆಕೆಂಡ್‌ಗಳು)

****************

ದೇಶದ ಸುಸ್ಥಿರ ಹಾಗೂ ಎಲ್ಲರನ್ನೊಳಗೊಂಡ ಅಭಿವೃದ್ಧಿ ಸಾಧಿಸಬೇಕಾದರೆ, ಸಮಾಜದಲ್ಲಿನ ಸೌಲಭ್ಯ ವಂಚಿತ ಮತ್ತು ಹಿಂದುಳಿದ ವರ್ಗಗಳ ಜನರ ಕಲ್ಯಾಣಕ್ಕಾಗಿ ಶ್ರಮಿಸುವುದು ಅತ್ಯಗತ್ಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಒತ್ತಿ ಹೇಳಿದ್ದಾರೆ.

ಚಂಡೀಗಢದಲ್ಲಿರುವ ಪಂಜಾಬ್ ವಿಶ್ವವಿದ್ಯಾಲಯದ 72ನೇ ಘಟಿಕೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ದೇಶಭಕ್ತಿಯನ್ನು ರೂಢಿಸಿಕೊಳ್ಳಬೇಕೆಂದು ಕರೆ ನೀಡಿದರು.

ಭವಿಷ್ಯದಲ್ಲಿ ಎದುರಾಗುವ ಸವಾಲುಗಳನ್ನು ಎದುರಿಸಲು ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಹಾಗೂ ಸಕಾರಾತ್ಮಕ ಭಾವನೆಗಳೊಂದಿಗೆ ಸಿದ್ಧರಾಗಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

****************

ಭಾರತ ಪ್ರವಾಸದಲ್ಲಿರುವ ಮಡಗಾಸ್ಕರ್ ರಾಷ್ಟ್ರೀಯ ಅಸೆಂಬ್ಲಿಯ ಅಧ್ಯಕ್ಷ ಜಸ್ಟಿನ್ ಟೋಕ್ಲಿ ನೇತೃತ್ವದ ನಿಯೋಗ, ಇಂದು ನವದೆಹಲಿಯ ಸಂಸತ್ ಭವನಕ್ಕೆ ಭೇಟಿ ನೀಡಿ, ಅಲ್ಲಿನ ವ್ಯವಸ್ಥೆಗಳ ಬಗ್ಗೆ ಮಾಹಿತಿ ಪಡೆದುಕೊಂಡಿತು.

ನಿಯೋಗದೊಂದಿಗೆ ಮಾತನಾಡಿದ ರಾಜ್ಯಸಭೆಯ ಉಪಸಭಾಪತಿ ಹರಿವಂಶ್, ಭಾರತ, ಮಡಗಾಸ್ಕರ್ ಜೊತೆ ಬಲವಾದ ದ್ವಿಪಕ್ಷೀಯ ಸಂಬಂಧ ಹೊಂದಿದೆ. ಮಡಗಾಸ್ಕರ್ ಸಂಸದೀಯ ನಿಯೋಗದ ಭೇಟಿಯಿಂದಾಗಿ ಉಭಯ ದೇಶಗಳ ದ್ವಿಪಕ್ಷೀಯ ಸಂಬಂಧ ಬಲವರ್ಧನೆಗೆ ಸಹಕಾರಿಯಾಗಲಿದೆ ಎಂದು ಹೇಳಿದರು. ಈ ನಿಯೋಗ ಮೊನ್ನೆ ದೆಹಲಿಗೆ ಆಗಮಿಸಿತ್ತು.

****************

ಐತಿಹಾಸಿಕ ದಂಡಿ ಉಪ್ಪಿನ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದ ಎಲ್ಲರಿಗೂ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ನರೇಂದ್ರ ಮೋದಿ, ಮಹಾತ್ಮಾಗಾಂಧಿ ಅವರ ನೇತೃತ್ವದಲ್ಲಿ ನಡೆದ ಈ ಸತ್ಯಾಗ್ರಹ ಸ್ವಾವಲಂಬಿ ಹಾಗೂ ಸ್ವಾತಂತ್ರ್ಯದ ಕಿಚ್ಚನ್ನು ದೇಶಾದ್ಯಂತ ವ್ಯಾಪಿಸುವಂತೆ ಮಾಡಿತ್ತು ಎಂದು ಹೇಳಿದ್ದಾರೆ.

ದಂಡಿ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದ ಎಲ್ಲರ ಶೌರ್ಯ, ತ್ಯಾಗ, ಸತ್ಯ ಮತ್ತು ಅಹಿಂಸೆಯ ಹೋರಾಟ ಎಲ್ಲಾ ಪೀಳಿಗೆಯ ಜನರಿಗೆ ಸ್ಪೂರ್ತಿಧಾಯಕವಾಗಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

****************

ಕೆನಡಾದಿಂದ ಅಮೆರಿಕಕ್ಕೆ ರಫ್ತಾಗುವ ಉಕ್ಕು ಮತ್ತು ಅಲ್ಯುಮಿನಿಯಂ ಉತ್ಪನ್ನಗಳ ಮೇಲೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತೆರಿಗೆಯನ್ನು ಅಧಿಕಗೊಳಿಸಿದ್ದಾರೆ.

ಆರಂಭಿಕ ದಿನಗಳಲ್ಲಿ ತೆರಿಗೆ ದರ ಶೇಕಡ 25 ರಷ್ಟು ಇದ್ದುದ್ದನ್ನು ಇದೀಗ ಶೇಕಡ 50 ಕ್ಕೆ ಏರಿಸಲಾಗಿದೆ. ಅಮೆರಿಕದ ಗ್ರಾಹಕರಿಗೆ ಒದಗಿಸುತ್ತಿದ್ದ ವಿದ್ಯುತ್ ದರವನ್ನು ಏರಿಕೆ ಮಾಡಿರುವ ಕೆನಡಾದ ಒಂಟಾರಿಯೊ ಅವರ ನಿರ್ಧಾರದ ಬೆನ್ನಲ್ಲೆ ರಫ್ತು ತೆರಿಗೆಯನ್ನು ದ್ವಿಗುಣಗೊಳಿಸಿರುವ ಡೊನಾಲ್ಡ್ ಟ್ರಂಪ್ ನಿರ್ಧಾರ ಹೊರಬಿದ್ದಿದೆ.

ಕೆನಡಾದ ರಫ್ತು ಉತ್ಪನ್ನಗಳ ಮೇಲೆ ಹೆಚ್ಚಿಸಿರುವ ತೆರಿಗೆ ದರ ಇಂದಿನಿಂದಲೇ ಜಾರಿಗೆ ಬರಲಿದೆ.

****************

ಅಮೆರಿಕದ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿ ತುಳಸಿ ಗಬ್ಬಾರ್ಡ್ ಇಂಡೋ ಪೆಸಿಫಿಕ್ ಪ್ರವಾಸದ ಅಂಗವಾಗಿ ಭಾರತಕ್ಕೆ ಭೇಟಿ ನೀಡುವ ಕಾರ್ಯಕ್ರಮವಿದೆ.

ಬಹು ರಾಷ್ಟಗಳ ಪ್ರವಾಸದ ಭಾಗವಾಗಿ ಅವರು, ಭಾರತಕ್ಕೆ ಭೇಟಿ ನೀಡಲಿದ್ದು, ಉಭಯ ದೇಶಗಳ ನಡುವೆ ಸಂಬಂಧಗಳ ಬಲವರ್ಧನೆ ಹಾಗೂ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಶಾಂತಿ ಮತ್ತು ಸ್ವಾತಂತ್ರ್ಯದ ಉದ್ದೇಶಗಳನ್ನು ಮನವರಿಕೆ ಮಾಡಿಕೊಡುವ ನಿಟ್ಟಿನಲ್ಲಿ ತಮ್ಮ ಪ್ರಯತ್ನವನ್ನು ಮುಂದುವರಿಸಲಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಹಾಗೂ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಶಯದಂತೆ ಗುಪ್ತಚರ ಮಾಹಿತಿ ಹಂಚಿಕೊಳ್ಳುವ ನಿಟ್ಟಿನಲ್ಲಿ ಅವರು ಸಂಬಂಧಪಟ್ಟವರ ಜೊತೆಗೆ ಚರ್ಚೆ ನಡೆಸಲಿದ್ದಾರೆ.

****************

ಪಾಕಿಸ್ತಾನದ ಬಲುಚಿಸ್ತಾನ ಪ್ರಾಂತ್ಯದಲ್ಲಿ ಭಯೋತ್ಪಾದಕರು, ಪೇಶಾವರ ಮೂಲದ ರೈಲಿನ ಮೇಲೆ ನಿನ್ನೆ ದಾಳಿ ನಡೆಸಿ ಸುಮಾರು 400 ಪ್ರಯಾಣಿಕರನ್ನು ಅಪಹರಿಸಿದ್ದ ಘಟನೆ ಸಂಬಂಧ 150 ಮಂದಿಯನ್ನು ಪಾಕಿಸ್ತಾನದ ಭದ್ರತಾ ಪಡೆಗಳು ರಕ್ಷಿಸಿದ್ದು, ಈ ಪೈಕಿ ಮಹಿಳೆಯರು ಮತ್ತು ಮಕ್ಕಳು ಸೇರಿದ್ದಾರೆ.

ಜಾಫರ್ ಎಕ್ಸ್‌ಪ್ರೆಸ್ ಅಪಹರಿಸಿದ್ದ ಘಟನೆಯಲ್ಲಿ ಪಾಲ್ಗೊಂಡಿದ್ದ 27 ಭಯೋತ್ಪಾದಕರನ್ನು ಭದ್ರತಾಪಡೆಗಳು ಹತ್ಯೆಗೈದಿವೆ ಎಂದು ಮೂಲಗಳು ತಿಳಿಸಿವೆ.

ಜಾಫರ್ ಎಕ್ಸ್‌ಪ್ರೆಸ್‌ನಲ್ಲಿ ಇನ್ನು ಹೆಚ್ಚು ಮಂದಿ ಇದ್ದಾರೆ ಎಂಬುದು ಸದ್ಯಕ್ಕೆ ತಿಳಿದು ಬಂದಿಲ್ಲ.

ಈ ಘಟನೆಗೆ ತಾನೇ ಹೊಣೆ ಎಂದು ಬಲೂಚ್ ಲಿಬರೇಷನ್ ಆರ್ಮಿ– ಬಿಎಲ್‌ಎ ಭಯೋತ್ಪಾದಕ ಸಂಘಟನೆ ಘೋಷಿಸಿದೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಬಿಎಲ್‌ಎ, ಈ ದಾಳಿಯಲ್ಲಿ 30 ಕ್ಕೂ ಹೆಚ್ಚು ಸೇನಾ ಸಿಬ್ಬಂದಿಯನ್ನು ಹತ್ಯೆಗೈದಿರುವುದಾಗಿ ಹೇಳಿಕೊಂಡಿದೆ. ತನ್ನ ಕಡೆ ಯಾವುದೇ ಸಾವು ನೋವು ಸಂಭವಿಸಿಲ್ಲ ಎಂದು ಹೇಳಿದೆ. ಆದರೆ, ಈ ವಿಚಾರವನ್ನು ಪಾಕಿಸ್ತಾನದ ಅಧಿಕಾರಿಗಳು ಖಚಿತಪಡಿಸಿಲ್ಲ.

****************

ನ್ಯಾಷನಲ್ ಏರೋನಾಟಿಕ್ಸ್ ಅಂಡ್ ಸ್ಪೇಸ್ ಅಡ್ಮಿನಿಸ್ಟ್ರೇಷನ್ – NASA ಇಡೀ ನಭೋಮಂಡಲದ ಅಭೂತಪೂರ್ವ ವಿವರಗಳೊಂದಿಗೆ ನಕ್ಷೆ ತಯಾರು ಮಾಡುವ ಒಂದು ಪರಿವರ್ತನಾ ಕಾರ್ಯಾಚರಣೆಯಾಗಿ SPHEREx ಎಂಬ ಬಾಹ್ಯಾಕಾಶ ದೂರದರ್ಶಕವನ್ನು ಉಡಾವಣೆ ಮಾಡಿದೆ.

ಈ ವೀಕ್ಷಣಾಲಯವು ನಿನ್ನೆ ಕ್ಯಾಲಿಫೋರ್ನಿಯಾದಿಂದ ಸ್ಪೇಸ್‌ಎಕ್ಸ್ ರಾಕೆಟ್‌ನಲ್ಲಿ ಉಡಾವಣೆಯಾಯಿತು. SPHEREx ಭೂಮಿಯಿಂದ 400 ಮೈಲುಗಳಷ್ಟು ಎತ್ತರದಲ್ಲಿ ಪರಿಭ್ರಮಿಸಲಿದ್ದು, ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಆಕಾಶವನ್ನು ಸ್ಕ್ಯಾನ್ ಮಾಡಿ ಲಕ್ಷಾಂತರ ಗೆಲಾಕ್ಸಿಗಳನ್ನು ಅಧ್ಯಯನ ಮಾಡುತ್ತದೆ.

****************

ನವದೆಹಲಿಯಲ್ಲಿ ನಡೆದ ವಿಶ್ವ ಪ್ಯಾರಾ ಗ್ರ್ಯಾಂಡ್ ಪ್ರಿಕ್ಸ್ ಅಥ್ಲೆಟಿಕ್ಸ್‌ನ ಆರಂಭದ ದಿನವಾದ ನಿನ್ನೆ ಭಾರತ ಕ್ರೀಡಾಪಟುಗಳು ಪುರುಷರ ಡಿಸ್ಕಸ್ ಥ್ರೋ ಎಫ್ 11 ಸ್ಪರ್ಧೆಯಲ್ಲಿ ಎಲ್ಲಾ ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಸಾಗರ್ 34.84 ಮೀಟರ್ ದೂರ ಎಸೆದು ಚಿನ್ನದ ಪದಕ ಗಳಿಸಿದ್ದಾರೆ. ನಂತರದ ಸ್ಥಾನದಲ್ಲಿರುವ ಬಾಲಾಜಿ ರಾಜೇಂದ್ರನ್ 26.98 ಮೀಟರ್ ದೂರ ಎಸೆದು ಬೆಳ್ಳಿ ಪದಕ ಮತ್ತು ಜನಕ್ ಸಿಂಗ್ ಹರ್ಸಾನಾ 25.13 ಮೀಟರ್ ಎಸೆಯುವ ಮೂಲಕ ಕಂಚಿನ ಪದಕಕ್ಕೆ ತೃಪ್ತಿ ಪಡೆದುಕೊಂಡಿದ್ದಾರೆ.

ಮಹಿಳೆಯರ 100 ಮೀಟರ್ ಓಟದ ಸ್ಪರ್ಧೆಯ ಪೈಕಿ ಟಿ–35, ಟಿ–36, ಟಿ–38, ಮತ್ತು ಟಿ–44 ವರ್ಗಗಳಲ್ಲಿ ಆಸ್ಟ್ರೇಲಿಯಾದ ರಿಯಾನನ್ ಕ್ಲಾರ್ಕ್ 13.14 ಸೆಕೆಂಡುಗಳಲ್ಲಿ ಗುರಿ ತಲುಪುವ ಮೂಲಕ ವಿಜಯಶಾಲಿಯಾಗಿದ್ದಾರೆ. ಭಾರತದ ಪ್ರೀತಿಪಾಲ್ ಇದೇ ಅಂತರವನ್ನು 14.85 ಸೆಕೆಂಡುಗಳಲ್ಲಿ ಗುರಿ ತಲುಪಿ ಬೆಳ್ಳಿ ಪದಕ ಗೆದ್ದರೆ, ಜರ್ಮನಿಯ ನಿಕೋಲ್ 15.35 ಸೆಕೆಂಡುಗಳಲ್ಲಿ ಗುರಿ ತಲುಪಿ ಕಂಚಿನ ಪದಕ ಗೆದ್ದಿದ್ದಾರೆ.

****************

ಜಮ್ಮು–ಕಾಶ್ಮೀರದ ಬಾರಾಮುಲ್ಲ ಜಿಲ್ಲೆಯ ಗುಲ್ಮಾರ್ಗ್‌ನಲ್ಲಿ ನಡೆಯುತ್ತಿರುವ ಎರಡನೇ ಹಂತದ ಖೇಲೋ ಇಂಡಿಯಾ ಚಳಿಗಾಲದ ಪಂದ್ಯಾವಳಿಗೆ ಇಂದು ತೆರೆ ಬೀಳಲಿದೆ.

*********ಮುಕ್ತಾಯ*******